# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2018-19ನೇ ಸಾಲಿನಲ್ಲಿ ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಮತ್ತು ತರಬೇತಿ ಅಭಿಯಾನ ಯೋಜನೆಯಡಿ (NMAET) ಕೃಷಿ ಯಾಂತ್ರೀಕರಣ ಉಪ ಅಭಿಯಾನ (SMAM) ಕಾರ್ಯಕ್ರಮಕ್ಕೆ ಎರಡನೇ ಕಂತಿನ ಬಾಕಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ**

1. ಸರ್ಕಾರದ ಆದೇಶ ಸಂಖ್ಯೆ: ಕೃಇ 56 ಕೃಉಇ 2018, ದಿನಾಂಕ: 10.07.2018 ಮತ್ತು ತಿದ್ದುಪಡಿ ದಿನಾಂಕ: 31.07.2018.
2. ಸರ್ಕಾರದ ಆದೇಶ ಸಂಖ್ಯೆ: ಕೃಇ 56 ಕೃಉಇ 2018 (ಭಾಗ-1), ದಿನಾಂಕ: 24.07.2018.
3. ಸರ್ಕಾರದ ಆದೇಶ ಸಂಖ್ಯೆ: ಕೃಇ 56 ಕೃಉಇ 2018, ದಿನಾಂಕ: 06.12.2018.
4. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: 3-1/2015-M&T (I&P), ದಿನಾಂಕ: 04.12.2018.
5. ಆರ್ಥಿಕ ಇಲಾಖೆಯ ಜಮಾ ದೃಢೀಕರಣ ಪತ್ರ ಸಂಖ್ಯೆ: FD 1 BGL 2018, ದಿನಾಂಕ: 13.12.2018.
6. ಕೃಷಿ ಆಯುಕ್ತರ ಪ್ರಸ್ತಾವನೆ ಸಂಖ್ಯೆ:ಜಕೃನಿ(ಕೃಯಾಂ)/SMAM/ಪ್ರಸ್ತಾವನೆ/ಅ.ಬಿ/ 2018-19, ದಿನಾಂಕ: 18.12.2018.
7. ಸರ್ಕಾರದ ಆದೇಶ ಸಂಖ್ಯೆ: ಕೃಇ 56 ಕೃಉಇ 2018, ದಿನಾಂಕ: 23.02.2019
8. 2018-19ನೇ ಸಾಲಿನ ಆಯವ್ಯಯ ಪೂರಕ ಅಂದಾಜು-2 & ಆರ್ಥಿಕ ಇಲಾಖೆಯ ಪತ್ರ ಸಂಖ್ಯೆ: ಆಇ 01 ಬಿಎಸ್‌ಜಿ 2019, ದಿನಾಂಕ: 01.03.2019.

**ಪ್ರಸ್ತಾವನೆ:**

2018-19ನೇ ಸಾಲಿನ ಆಯವ್ಯಯ ಸಂಪುಟ-3ರಲ್ಲಿ ಕೇಂದ್ರ ಪುರಸ್ಕೃತ ಯೋಜನೆ ರಾಷ್ಟ್ರೀಯ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಮತ್ತು ತರಬೇತಿ (NMAET) ಯೋಜನೆ ಲೆಕ್ಕ ಶೀರ್ಷಿಕೆ:2401-00-800-1-53 ಅಡಿ ಒಟ್ಟು ರೂ.8530.00 ಲಕ್ಷ ಅನುದಾನ ನಿಗದಿಪಡಿಸಲಾಗಿದ್ದು, ಪರಿಷ್ಕೃತ ಅಂದಾಜಿನಲ್ಲಿ ಹೆಚ್ಚುವರಿಯಾಗಿ ರೂ. 6987.95 ಲಕ್ಷಗಳನ್ನು ಒದಗಿಸಲಾಗಿರುತ್ತದೆ.

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ, ಕೇಂದ್ರ ಪುರಸ್ಕೃತ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಮತ್ತು ತರಬೇತಿ (NMAET) ಯೋಜನೆಯಡಿಯ ಕೃಷಿ ಯಾಂತ್ರೀಕರಣ ಉಪ ಅಭಿಯಾನ (SMAM) ಕಾರ್ಯಕ್ರಮದಡಿ, 2017-18ನೇ ಸಾಲಿನ ಮರುಮೌಲ್ಯೀಕೃತ ಕೇಂದ್ರದ ಪಾಲಿನ ಅನುದಾನ ರೂ. 1587.22 ಲಕ್ಷಗಳಿಗೆ ಪೂರಕವಾಗಿ ರಾಜ್ಯದ ಪಾಲಿನ ಅನುದಾನ ರೂ. 1058.15 ಲಕ್ಷಗಳನ್ನು ಸೇರಿಸಿ ಒಟ್ಟು ರೂ. 2645.37 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.

ಮೇಲೆ ಓದಲಾದ (2)ರ ಸರ್ಕಾರದ ಆದೇಶದಲ್ಲಿ, 2018-19ನೇ ಸಾಲಿನ ಕೇಂದ್ರ ಪುರಸ್ಕೃತ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಮತ್ತು ತರಬೇತಿ (NMAET) ಯೋಜನೆಯಡಿಯ ಕೃಷಿ ಯಾಂತ್ರೀಕರಣ ಉಪ ಅಭಿಯಾನ (SMAM) ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ, 2018-19ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ: 2401-00-800-1-53 ಅಡಿ ಲಭ್ಯವಿದ್ದ ಅನುದಾನ ರೂ. 3209.15 ಲಕ್ಷಗಳನ್ನು ಮೊದಲನೇ ಕಂತಿನ ಅನುದಾನವಾಗಿ ಬಿಡುಗಡೆ ಮಾಡುತ್ತಾ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಮಂಜೂರಾತಿ ನೀಡಲಾಗಿದೆ.

--

ಮೇಲೆ ಓದಲಾದ (3)ರ ಸರ್ಕಾರದ ಆದೇಶದಲ್ಲಿ, 2018-19ನೇ ಸಾಲಿನ ಕೇಂದ್ರ ಪುರಸ್ಕೃತ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಮತ್ತು ತರಬೇತಿ (NMAET) ಯೋಜನೆಯಡಿಯ ಕೃಷಿ ಯಾಂತ್ರೀಕರಣ ಉಪ ಅಭಿಯಾನ (SMAM) ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ, 2018-19ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ: 2401-00-800-1-57ಅಡಿಯಿಂದ ಲೆಕ್ಕ ಶೀರ್ಷಿಕೆ: 2401-00-800-1-53 ಗೆ ಪುನರ್ವಿನಿಯೋಗದ ಮೂಲಕ ಲಭ್ಯವಾದ ಅನುದಾನ ರೂ. 6620.60 ಲಕ್ಷಗಳನ್ನು ಮೊದಲನೇ ಕಂತಿನ ಉಳಿಕೆ ಅನುದಾನವಾಗಿ ಬಿಡುಗಡೆ ಮಾಡಲಾಗಿದೆ.

ಮೇಲೆ ಓದಲಾದ (4)ರ ಕೇಂದ್ರ ಸರ್ಕಾರದ ಪತ್ರದಲ್ಲಿ, 2018-19ನೇ ಸಾಲಿನ ಕೇಂದ್ರ ಪುರಸ್ಕೃತ ಯೋಜನೆ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಮತ್ತು ತರಬೇತಿ (NMAET) ಯೋಜನೆಯಡಿಯ ಉಪ ಯೋಜನೆ ಕೃಷಿ ಯಾಂತ್ರೀಕರಣ ಉಪ ಅಭಿಯಾನ (SMAM) ಕಾರ್ಯಕ್ರಮಕ್ಕೆ ಕೇಂದ್ರದ ಪಾಲಿನ ಎರಡನೇ ಕಂತಿನ ಅನುದಾನ ರೂ. 4585.78 ಲಕ್ಷಗಳನ್ನು ಬಿಡುಗಡೆಗೊಳಿಸಿರುತ್ತದೆ.

ಸದರಿ ಕೇಂದ್ರ ಸರ್ಕಾರದ ಅನುದಾನ ರೂ. 4585.78 ಲಕ್ಷಗಳು ರಾಜ್ಯದ ಬೊಕ್ಕಸಕ್ಕೆ ಜಮೆಯಾದ ಕುರಿತು ಮೇಲೆ ಓದಲಾದ (5)ರ ಆರ್ಥಿಕ ಇಲಾಖೆಯ ಜಮಾ ದೃಢೀಕರಣ ಪತ್ರದಲ್ಲಿ ದೃಢೀಕರಿಸಲಾಗಿರುತ್ತದೆ.

ಮೇಲೆ ಓದಲಾದ (6)ರ ಕೃಷಿ ಆಯುಕ್ತರ ಪ್ರಸ್ತಾವನೆಯಲ್ಲಿ, 2018-19ನೇ ಸಾಲಿನಲ್ಲಿ ಕೇಂದ್ರ ಪುರಸ್ಕೃತ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಮತ್ತು ತರಬೇತಿ (NMAET) ಯೋಜನೆಯಡಿಯ ಕೃಷಿ ಯಾಂತ್ರೀಕರಣ ಉಪ ಅಭಿಯಾನ (SMAM) ಕಾರ್ಯಕ್ರಮದಡಿ ಎರಡನೇ ಕಂತಿನ ಅನುದಾನವಾಗಿ ಕೇಂದ್ರ ಸರ್ಕಾರದಿಂದ ರೂ. 4585.78 ಲಕ್ಷಗಳು ಬಿಡುಗಡೆಯಾಗಿದ್ದು, ಸದರಿ ಅನುದಾನಕ್ಕೆ ಪೂರಕವಾಗಿ ರಾಜ್ಯದ ಪಾಲಿನ ಅನುದಾನ ರೂ. 3057.19 ಲಕ್ಷಗಳನ್ನು ಸೇರಿಸಿ ಒಟ್ಟಾರೆ **ರೂ. 7642.97 ಲಕ್ಷಗಳನ್ನು** 2018-19ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ: 2401-00-800-1-53ರಡಿ ಲಭ್ಯವಿರುವ ಅನುದಾನದಿಂದ ಈ ಕೆಳಕಂಡಂತೆ ಬಿಡುಗಡೆ ಮಾಡಲು ಕೋರಲಾಗಿದೆ.

| ಕ್ರ.ಸಂ. | ಘಟಕ | ಕೇಂದ್ರದ ಪಾಲು (ರೂ. ಲಕ್ಷಗಳಲ್ಲಿ) | ರಾಜ್ಯದ ಪಾಲು (ರೂ. ಲಕ್ಷಗಳಲ್ಲಿ) | ಒಟ್ಟು (ರೂ. ಲಕ್ಷಗಳಲ್ಲಿ) |
|---|---|---|---|---|
| 1 | ಸಾಮಾನ್ಯ (106) | 3275.78 | 2183.86 | 5459.64 |
| 2 | ವಿ.ಘ.ಯೋ. (422) | 960.00 | 640.00 | 1600.00 |
| 3 | ಗಿ.ಉ.ಯೋ. (423) | 350.00 | 233.33 | 583.33 |
| | ಒಟ್ಟು | **4585.78** | **3057.19** | **7642.97** |

ಮೇಲೆ ಓದಲಾದ (7)ರ ಸರ್ಕಾರದ ಆದೇಶದಲ್ಲಿ, ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಮತ್ತು ತರಬೇತಿ (NMAET) ಯೋಜನೆಯಡಿಯ ಕೃಷಿ ಯಾಂತ್ರೀಕರಣ ಉಪ ಅಭಿಯಾನ (SMAM) ಕಾರ್ಯಕ್ರಮದಡಿ 2ನೇ ಕಂತಿನ ಅನುದಾನಕ್ಕೆ ಕೊರತೆಯಾಗಿದ್ದ ಒಟ್ಟು ರೂ. 7642.97 ಲಕ್ಷಗಳ ಪೈಕಿ ರೂ. 5683.33 ಲಕ್ಷ + ಪೂರಕ ಅಂದಾಜು-1ರಲ್ಲಿ ಒದಗಿಸಲಾದ ಅನುದಾನ ರೂ. 24.88 ಲಕ್ಷಗಳು ಸೇರಿದಂತೆ ಒಟ್ಟಾರೆ ರೂ. 5708.21 ಲಕ್ಷಗಳನ್ನು 2018-19ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ: 2401-00-800-1-53 ಅಡಿ ಈ ಕೆಳಕಂಡಂತೆ ಬಿಡುಗಡೆ ಮಾಡಲಾಗಿದೆ.

| ಕ್ರ.ಸಂ. | ಘಟಕ | ಬಿಡುಗಡೆ ಮಾಡಲಾದ ಒಟ್ಟು ಅನುದಾನ (ರೂ. ಲಕ್ಷಗಳಲ್ಲಿ) |
|---|---|---|
| 1 | ಸಾಮಾನ್ಯ (106) | 3524.88 |
| 2 | ವಿ.ಘ.ಯೋ. (422) | 1600.00 |
| 3 | ಗಿ.ಉ.ಯೋ. (423) | 583.33 |
| | ಒಟ್ಟು | **5708.21** |

ಮೇಲೆ ಓದಲಾದ (8)ರ 2018-19ನೇ ಸಾಲಿನ ಪೂರಕ ಅಂದಾಜು-2ರಲ್ಲಿ, ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಮತ್ತು ತರಬೇತಿ (NMAET) ಯೋಜನೆಯಡಿಯ ಕೃಷಿ ಯಾಂತ್ರೀಕರಣ ಉಪ ಅಭಿಯಾನ (SMAM) ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ, 2018-19ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ: 2401-00-800-1-53, ಉಪ ಶೀರ್ಷಿಕೆ: 106ರಡಿ ರೂ. 5459.64 ಲಕ್ಷ, 422 ರಡಿ ರೂ. 1600.00 ಲಕ್ಷ ಮತ್ತು 423ರಡಿ ರೂ. 583.33 ಲಕ್ಷ ಅನುದಾನವನ್ನು ಹೆಚ್ಚುವರಿಯಾಗಿ ಒದಗಿಸಲಾಗಿದೆ.

2018-19ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ: 2401-00-800-1-53 ರಡಿಯ ಉಪ ಶೀರ್ಷಿಕೆ 106ರಡಿ ಹೆಚ್ಚುವರಿಯಾಗಿ ಮಂಜೂರಾಗಿರುವ ರೂ. 5459.64 ಲಕ್ಷ ಅನುದಾನದ ಪೈಕಿ ಈಗಾಗಲೇ ಬಿಡುಗಡೆಯಾಗಿರುವ ರೂ. 3500.00 ಲಕ್ಷಗಳನ್ನು ಹೊರತುಪಡಿಸಿ, ಬಿಡುಗಡೆಗೆ ಬಾಕಿ ಉಳಿದಿರುವ ರೂ. 1959.64 ಲಕ್ಷಗಳನ್ನು ಕೃಷಿ ಇಲಾಖೆಯು ಬಳಸಲು ಅನುವಾಗುವಂತೆ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 56 ಕೃಉಇ 2018, ಬೆಂಗಳೂರು, ದಿನಾಂಕ: 08.03.2019.**

ಕೇಂದ್ರ ಪುರಸ್ಕೃತ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಮತ್ತು ತರಬೇತಿ (NMAET) ಯೋಜನೆಯಡಿಯ ಕೃಷಿ ಯಾಂತ್ರೀಕರಣ ಉಪ ಅಭಿಯಾನ (SMAM) ಕಾರ್ಯಕ್ರಮ ಅನುಷ್ಠಾನಕ್ಕೆ ಪೂರಕ ಅಂದಾಜು-2ರಲ್ಲಿ ಒದಗಿಸಿಕೊಂಡು ಬಿಡುಗಡೆಗೆ ಬಾಕಿ ಉಳಿದಿರುವ ಅನುದಾನ **ರೂ. 1959.64 ಲಕ್ಷಗಳನ್ನು** (ಒಂದು ಸಾವಿರದ ಒಂಬೈನೂರ ಐವತ್ತೊಂಭತ್ತು ಲಕ್ಷದ ಅರವತ್ತ ನಾಲ್ಕು ಸಾವಿರ ರೂಪಾಯಿಗಳು ಮಾತ್ರ) 2018-19ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ: 2401-00-800-1-53 ಉಪ ಶೀರ್ಷಿಕೆ: 106 ರಡಿ ಕೃಷಿ ಇಲಾಖೆಗೆ ಬಿಡುಗಡೆ ಮಾಡುತ್ತಾ, ಕೇಂದ್ರದ ಪಾಲಿನ ಶೇ.60 ಹಾಗೂ ರಾಜ್ಯದ ಪಾಲಿನ ಶೇ.40ರ ಅನುಪಾತದಲ್ಲಿ ಅಳವಡಿಸಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಸರ್ಕಾರವು ಈ ಮೂಲಕ ಮಂಜೂರಾತಿ ನೀಡಿದೆ.

ಕೃಷಿ ನಿರ್ದೇಶಕರು ಕೇಂದ್ರ ಸರ್ಕಾರವು ಆಗಿಂದ್ದಾಗ್ಗೆ ಹೊರಡಿಸುವ ಮಾರ್ಗಸೂಚಿ ಅನುಸಾರ ಯೋಜನೆಯನ್ನು ಅನುಷ್ಠಾನಗೊಳಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 40 ವೆಚ್ಚ-4/2019, ದಿನಾಂಕ: 16.02.2019 ರಲ್ಲಿ ನೀಡಿರುವ ಸಹಮತಿ ಹಾಗೂ ಆದೇಶ ಸಂ: ಎಫ್‌ಡಿ 04 ಟಿಎಫ್‌ಪಿ 2018, ದಿ:08-01-2019 ಮತ್ತು ಪತ್ರ ಸಂಖ್ಯೆ:ಆಇ 01 ಬಿಎಸ್‌ಜಿ2019, ದಿ:01.03.2019 ರಲ್ಲಿ ಸರ್ಕಾರದ ಕಾರ್ಯದರ್ಶಿರವರಿಗೆ ಪ್ರತ್ಯಾಯೋಜಿಸಲಾಗಿರುವ ಆರ್ಥಿಕ ಅಧಿಕಾರದ ಮೇರೆಗೆ ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**

B S Nagarathnam

(ಬಿ.ಎಸ್. ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ)

08/03/19

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್.ಎಸ್.ಎ) / (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.
2. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.

--

5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಕೃಷಿ ಆಯುಕ್ತರು,/ಕೃಷಿ ನಿರ್ದೇಶಕರು, ಶೇಷಾದ್ರಿ ರಸ್ತೆ, ಬೆಂಗಳೂರು.
7. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
8. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
9. ನಿರ್ದೇಶಕರು, TNMC, ಖನಿಜ ಭವನ ಬೆಂಗಳೂರು.
10. ಸರ್ಕಾರದ ಅಧೀನ ಕಾರ್ಯದರ್ಶಿ (FR & CC), ಆರ್ಥಿಕ ಇಲಾಖೆ, ಬೆಂಗಳೂರು.
11. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ– 4&5), ಆರ್ಥಿಕ ಇಲಾಖೆ, ಬೆಂಗಳೂರು
12. ಆಂತರಿಕ ಆರ್ಥಿಕ ಸಲಹೆಗಾರರು ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು
13. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.